

ಅರುಣ ಪಿ. ಭಟ್ಟ

## ವಾರಭವಿಷ್ಯ: 19.09.2024ರಿಂದ 25.09.2024ರವರೆಗೆ




ವೃತ್ತಿನಿರತರಿಗೆ ಉತ್ತಮ ದಿನಗಳಿವು. ಉದ್ಯೋಗ ಸ್ಥಳದಲ್ಲಿ ನಿಮ್ಮ ಪಾಲಿನ ಜವಾಬ್ದಾರಿ ಜಾಸ್ತಿ ಆಗಲಿದೆ. ಆದಾಯದಲ್ಲಿ ಹೆಚ್ಚಳ ಆಗಬಹುದು. ಉದ್ಯಮ, ವ್ಯಾಪಾರ ಮಾಡುವವರಿಗೆ ಲಾಭ ಹೆಚ್ಚಾಗಲಿದೆ. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ತೆಗೆದುಕೊಳ್ಳಿ. ವಿರೋಧಿಗಳು ನಿಮಗೆ ಸಮಸ್ಯೆ ಮಾಡಲು ಪ್ರಯತ್ನಿಸಬಹುದು. ಶುಭದಿನ 20. ಕನಕಧಾರಾ ಸ್ತೋತ್ರ ಪಠಿಸಿರಿ.




ಪ್ರೀತಿಪಾತ್ರರೊಂದಿಗೆ ಉತ್ತಮ ಸಮಯವನ್ನು ಕಳೆಯಲಿದ್ದೀರಿ. ಸೋದರರ ಬಾಂಧವ್ಯ ಗಟ್ಟಿಯಾಗಲಿದೆ. ಧಾರ್ಮಿಕ, ಸಾಮಾಜಿಕ ಕಾರ್ಯಗಳಲ್ಲಿ ಹೆಚ್ಚು ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಹೆಸರಾಂತ ಸಂಸ್ಥೆಯೊಂದರಲ್ಲಿ ಉದ್ಯೋಗ ದೊರೆಯುವ ಅವಕಾಶ ಇದೆ. ಪದೋನ್ನತಿ ಸಿಗುವ ಯೋಗ ಇದೆ. ನಿಮ್ಮ ಸಾಧನೆಯಿಂದ ಪೋಷಕರು ಸಂತೋಷ ಪಡುತ್ತಾರೆ. ಶುಭದಿನ 23. ಹನುಮಾನ್ ಚಾಲೀಸ್ ಪಠಿಸಿರಿ.




ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದೀರಿ. ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಕುಟುಂಬದಲ್ಲಿ ಭಿನ್ನಾಭಿಪ್ರಾಯ ತಲೆದೋರುವ ಸಾಧ್ಯತೆ ಇದೆ. ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಸಾಧ್ಯತೆ ಇದೆ. ಧಾರ್ಮಿಕ ಆಚರಣೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಜವಾಬ್ದಾರಿಯುತ ಕೆಲಸವೊಂದಕ್ಕೆ ನಿಮ್ಮನ್ನು ನೇಮಿಸುವ ಸಾಧ್ಯತೆಗಳಿವೆ. ಶುಭದಿನ 22. ವಿಷ್ಣು ಸಹಸ್ರನಾಮ ಪಠಿಸಿರಿ.




ಸಂಗಾತಿ ಜೊತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿ ಆಗಲಿದೆ. ಅವಿವಾಹಿತರಿಗೆ ಸೂಕ್ತ ಸಂಬಂಧ ದೊರೆಯುವ ಸಾಧ್ಯತೆ ಇದೆ. ದೂರ ಪ್ರಯಾಣ ಮುಂದಕ್ಕೆ ಹಾಕುವುದು ಒಳಿತು. ವೃತ್ತಿಪರ ಜೀವನದಲ್ಲೂ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸಣ್ಣ ಪುಟ್ಟ ಭಿನ್ನಾಭಿಪ್ರಾಯಗಳು ಎದುರಾಗಬಹುದು. ಅದೃಷ್ಟ ನಿಮ್ಮ ಕೈ ಹಿಡಿಯಲಿದೆ. ಶುಭದಿನ 19. ಚಂಡಿ ಪಾರಾಯಣ ಮಾಡಿರಿ.




ಹಣಕಾಸು ವಿದೇಶ ವ್ಯವಹಾರದಲ್ಲಿ ಏಳ್ಗೆ ಇದೆ. ಇದೇ ವೇಳೆ ಆತಂಕ, ಆರೋಗ್ಯ ಸಮಸ್ಯೆಗಳು ಕಾಡಬಹುದು. ವ್ಯವಹಾರ ಮಾಡುತ್ತಿರುವವರಿಗೆ ಲಾಭ ಇದೆ. ವಿರೋಧಿಗಳಿಂದ ಕಾನೂನು ವ್ಯಾಜ್ಯಗಳು ಎದುರಾಗಬಹುದು. ಈ ವಾರದಲ್ಲಿ ನಿಮ್ಮ ವರ್ಚಸ್ಸು ಬದಲಾಗಲಿದೆ. ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸಕ್ರಿಯರಾಗಿ ಪಾಲ್ಗೊಳ್ಳಲಿದ್ದೀರಿ. ಶುಭದಿನ 20. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಮಕ್ಕಳಿಗೆ ಸಂಬಂಧಿಸಿದಂತೆ ಶುಭ ಸುದ್ದಿ ಕೇಳಲಿದ್ದೀರಿ. ಆರ್ಥಿಕವಾಗಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಅತ್ಯುತ್ತಮ ಅವಕಾಶ ಸಿಗಲಿದೆ. ಕಾನೂನು ವ್ಯಾಜ್ಯಗಳಲ್ಲಿ ಬಹಳ ಎಚ್ಚರಿಕೆಯಿಂದ ಹೆಜ್ಜೆಗಳನ್ನು ಇಡಬೇಕು. ವಿರೋಧಿಗಳಿಂದ ಹಲವು ಬಗೆಯ ಸಮಸ್ಯೆಗಳು ಎದುರಾಗುವ ಸಾಧ್ಯತೆ ಇದೆ. ವಾರಾಂತ್ಯದ ಹೊತ್ತಿಗೆ ಏಳಿಗೆಗಳನ್ನು ಕಾಣುತ್ತೀರಿ. ಶುಭದಿನ 19. ಕಾಲಭೈರವನ ಸೇವೆ ಮಾಡಿರಿ.




ಕುಟುಂಬದಲ್ಲಿ ಸಂತಸದ ವಾತಾವರಣ ಇರಲಿದೆ. ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ ಇದೆ. ವ್ಯಾಪಾರ ವ್ಯವಹಾರಗಳಲ್ಲೂ ಪ್ರಗತಿ ಇದೆ. ಈ ಹಿಂದಿಗಿಂತ ಆರ್ಥಿಕ ಪರಿಸ್ಥಿತಿ ಉತ್ತಮವಾಗಿರುತ್ತದೆ. ವಿವಿಧ ಕ್ಷೇತ್ರಗಳಲ್ಲಿ ನಿರೀಕ್ಷಿತ ಫಲಿತಾಂಶ ಸಿಗಲಿದೆ. ಈ ಹಿಂದಿನ ವಾರಗಳಿಗೆ ಹೋಲಿಸಿದರೆ ಈ ವಾರ ಉತ್ತಮ ಫಲಿತಾಂಶವನ್ನು ಪಡೆಯಲಿದ್ದೀರಿ. ಇದರಿಂದ ಆತ್ಮವಿಶ್ವಾಸ ಹೆಚ್ಚಾಗಲಿದೆ. ಶುಭದಿನ 23. ಲಿಂಗಾಷ್ಟಕ ಪಠಿಸಿರಿ.




ಆತ್ಮವಿಶ್ವಾಸ ಹೆಚ್ಚಾಗಲಿದೆ. ಸೋದರ ಸೋದರಿಯರ ಜತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಅದೃಷ್ಟ ನಿಮ್ಮ ಕೈ ಹಿಡಿಯಲಿದೆ. ದಾನ ಧರ್ಮ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಕೌಟುಂಬಿಕ ಜೀವನದಲ್ಲಿ ಸಂತೋಷ ಇರಲಿದೆ. ಪೋಷಕರ ಜತೆಗೆ ಸಂತೋಷದ ಸಮಯ ಕಳೆಯಲಿದ್ದೀರಿ. ವಾಹನ, ಮನೆ ಖರೀದಿಗೆ ಪ್ರಶಸ್ತವಾದ ಸಮಯ ಇದು. ಶುಭದಿನ 22. ಶ್ರೀರಾಮರಕ್ಷಾ ಸ್ತೋತ್ರ ಓದಿರಿ.




ವೈಯಕ್ತಿಕ ಜೀವನದಲ್ಲಿ ಸಂಭ್ರಮದ ವಾತಾವರಣ ಇರಲಿದೆ. ಕುಟುಂಬದಲ್ಲಿ ಒಗ್ಗಟ್ಟು ಹೆಚ್ಚಾಗಲಿದೆ. ಆಸ್ತಿ ವಿಚಾರದಲ್ಲಿ ಶುಭ ಸುದ್ದಿ ಕೇಳುವ ಯೋಗ ಇದೆ. ವಿದೇಶಿ ವ್ಯವಹಾರ ಹೂಡಿಕೆಯಲ್ಲಿ ಲಾಭ ಪಡೆಯಲಿದ್ದೀರಿ. ಆರೋಗ್ಯ ವಿಚಾರದಲ್ಲಿ ಎಚ್ಚರಿಕೆಯಿಂದ ಇರಬೇಕು. ಸರ್ಕಾರಿ ಖಾಸಗಿ ಸಂಸ್ಥೆಗಳ ಜತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ ಇದೆ. ಶುಭದಿನ 19. ನವದುರ್ಗಾ ಆರಾಧನೆ ಮಾಡಿರಿ.




ವ್ಯವಹಾರದಲ್ಲಿ ಪ್ರಗತಿಗೆ ಅವಕಾಶ ಇದೆ. ಸ್ಥಿರಾಸ್ತಿಯಲ್ಲಿ ಲಾಭ ಗಳಿಸುವ ಯೋಗ ಇದೆ. ವಿರೋಧಿಗಳು ನಿಮ್ಮನ್ನು ಕಾನೂನು ಸಮಸ್ಯೆಗಳಲ್ಲಿ ಸಿಲುಕಿಸಬಹುದು. ಸೈನ್ಯ, ಪೊಲೀಸ್ ಮತ್ತಿತರ ಇಲಾಖೆಗಳಲ್ಲಿ ಕಾರ್ಯ ನಿರ್ವಹಿಸುವವರು ಮೇಲುಗೈ ಸಾಧಿಸಲಿದ್ದೀರಿ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿರೀಕ್ಷೆಗಿಂತ ಉತ್ತಮವಾದ ಫಲಿತಾಂಶ ದೊರೆಯಲಿದೆ. ಶುಭದಿನ 20. ಶಿವಕವಚ ಪಠಣ ಮಾಡಿರಿ.




ಹಣಕಾಸು ಹೂಡಿಕೆಗೆ ಹಲವು ಅವಕಾಶಗಳು ದೊರೆಯಲಿವೆ. ಸಾಲ ಮರುಪಾವತಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೀರಿ. ನಿಮ್ಮ ಸಂಗಾತಿ ನಿರ್ಲಕ್ಷ್ಯ ಮಾಡುತ್ತಿದ್ದಾರೇನೋ ಎಂಬ ಭಾವನೆ ಮೂಡಲಿದೆ. ಆದ್ದರಿಂದ ಇಂಥ ವಿಚಾರಗಳನ್ನು ಬಹಳ ಎಚ್ಚರಿಕೆಯಿಂದ ನಿರ್ವಹಿಸಿ. ನೀವು ಅಂದುಕೊಂಡಂತೆ ಆಸ್ತಿ ವ್ಯವಹಾರಗಳು ನಡೆಯಲಿವೆ. ಧಾರ್ಮಿಕ ಆಚರಣೆ ಮಾಡಲಿದ್ದೀರಿ. ಶುಭದಿನ 21. ಲಲಿತಾ ಸಹಸ್ರನಾಮ ಪಠಿಸಿರಿ.




ನಿಮ್ಮ ಆರ್ಥಿಕ ಸ್ಥಿತಿ ಉತ್ತಮವಾಗಲಿದೆ. ಶೈಕ್ಷಣಿಕ, ಬೌದ್ಧಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದ್ದೀರಿ. ಸ್ನೇಹಿತರು, ಸಂಬಂಧಿಕರಿಂದ ಮಹತ್ವದ ಮಾಹಿತಿ ದೊರೆಯಲಿದೆ. ರುಚಿಕಟ್ಟಾದ ಆಹಾರ ಸವಿಯುವ ಯೋಗ ಇದೆ. ಮಕ್ಕಳ ವಿಚಾರದಲ್ಲಿ ಶುಭ ಸುದ್ದಿ ಕೇಳುವಂಥ ಯೋಗ ಇದೆ. ನಿಮ್ಮ ಬುದ್ಧಿಶಕ್ತಿಯ ಸಹಾಯದಿಂದ ಹಲವು ಕೆಲಸಗಳನ್ನು ಮಾಡಿ ಮುಗಿಸಲಿದ್ದೀರಿ. ಶುಭದಿನ 24. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.